**Akashvani : Bangalore**
**National Bulletin In Kannada**
**28.10.2024 / 13.10 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**28.10.2024 / 13.10 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಪ್ರಧಾನಿ ನರೇಂದ್ರ ಮೋದಿ, ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಝ್ ಜಂಟಿಯಾಗಿ ಟಾಟಾ ಏರ್ ಕ್ರಾಫ್ಟ್ ಕಾಂಪ್ಲೆಕ್ಸ್ ಉದ್ಘಾಟನೆ

೨. ಭತ್ತದ ಬೆಂಬಲ ಬೆಲೆ ೨ ಸಾವಿರದ ೩೦೦ ರೂಪಾಯಿ ಹೆಚ್ಚಳ

೩. ಅಮೆರಿಕದ ಶ್ವೇತ ಭವನದಲ್ಲಿ ದೀಪಾವಳಿ ಆಚರಿಸಲಿರುವ ಅಧ್ಯಕ್ಷ ಜೋ ಬೈಡನ್

೪. ವಿಶ್ವ ಟೇಬಲ್ ಟೆನಿಸ್ ; ಮಹಿಳೆಯರ ಡಬಲ್ಸ್ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತದ ಜೋಡಿ

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಹಾಗೂ ಸ್ಪೇನ್ ದೇಶದ ಅಧ್ಯಕ್ಷ ಪೆಡ್ರೊ ಸ್ಯಾಂಚೆಝ್ ಗುಜರಾತ್‌ನ ವಡೋದರದಲ್ಲಿರುವ ಟಾಟಾ ಅಡ್ವಾನ್ಸ್‌ಡ್ ಸಿಸ್ಟಮ್ಸ್ ಲಿಮಿಟೆಡ್, ಟಿಎಎಸ್‌ಎಲ್ ನ ಕ್ಯಾಂಪಸ್‌ನಲ್ಲಿ ಸಿ-೨೯೫ ವಿಮಾನಗಳನ್ನು ತಯಾರಿಸುವ ಟಾಟಾ ಏರ್‌ಕ್ರಾಫ್ಟ್ ಕಾಂಪ್ಲೆಕ್ಸ್‌ನ್ನು ಜಂಟಿಯಾಗಿ ಉದ್ಘಾಟಿಸಿದರು. ಸಿ-೨೯೫ ಕಾರ್ಯಕ್ರಮದಡಿಯಲ್ಲಿ ಒಟ್ಟು ೫೬ ವಿಮಾನಗಳನ್ನು ಅಭಿವೃದ್ಧಿಪಡಿಸಲಾಗುವುದು. ಈ ಪೈಕಿ ೧೬ ವಿಮಾನಗಳು ಸ್ಪೇನ್‌ನಿಂದ ನೇರವಾಗಿ ಪೂರೈಸಲಾಗುತ್ತಿದ್ದು, ಉಳಿದ ೪೦ ವಿಮಾನಗಳು ಭಾರತದಲ್ಲಿ ತಯಾರಾಗಲಿವೆ. ಟಾಟಾ ಅಡ್ವಾನ್ಸ್ ಸಿಸ್ಟಮ್ಸ್ ಲಿಮಿಟೆಡ್ ಈ ವಿಮಾನಗಳನ್ನು ಭಾರತದಲ್ಲೇ ತಯಾರಿಸುವ ಜವಾಬ್ದಾರಿ ಹೊಂದಿದೆ. ಉದ್ಘಾಟನಾ ಸಮಾರಂಭದ ನಂತರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತದಲ್ಲಿ ರಕ್ಷಣಾ ಉತ್ಪಾದನಾ ಪರಿಸರ ವ್ಯವಸ್ಥೆಯು ಇಂದು ಹೊಸ ಎತ್ತರವನ್ನು ಮುಟ್ಟಿದೆ ಎಂದು ಸಂತಸ ವ್ಯಕ್ತಪಡಿಸಿದರು. ೧೦ ವರ್ಷಗಳ ಹಿಂದೆ ಸ್ಪಷ್ಟವಾದ ನಿರ್ಧಾರಗಳನ್ನು ನಾವು ಕೈಗೊಳ್ಳದೇ ಇದ್ದಿದ್ದರೆ ಈ ಮಟ್ಟ ತಲುಪಲು ಸಾಧ್ಯವಿರಲಿಲ್ಲ. ಆ ಸಮಯದಲ್ಲಿ ಭಾರತದಲ್ಲಿ ಇಷ್ಟು ದೊಡ್ಡ ಪ್ರಮಾಣದ ರಕ್ಷಣಾ ಉತ್ಪಾದನೆ ಸಾಧ್ಯವೆಂದು ಯಾರೂ ಊಹಿಸಿರಲಿಲ್ಲ ಎಂದು ಪ್ರಧಾನಿ ನುಡಿದರು. ನಾವು ಹೊಸ ದಾರಿಯಲ್ಲಿ ನಡೆಯಲು ಅಂದು ನಿರ್ಧರಿಸಿದ್ದೆವು. ನಮಗಾಗಿ ಹೊಸ ಗುರಿಯನ್ನು ನಿಗದಿಪಡಿಸಿಕೊಂಡೆವು. ಅದರ ಫಲಿತಾಂಶ ಈಗ ನಮ್ಮ ಮುಂದಿದೆ ಎಂದು ಹೇಳಿದರು. ರಕ್ಷಣಾ ಉತ್ಪಾದನೆಯಲ್ಲಿ ಖಾಸಗಿ ವಲಯದ ಭಾಗವಹಿಸುವಿಕೆಯನ್ನು ವಿಸ್ತರಿಸಲಾಗಿದ್ದು, ಸಾರ್ವಜನಿಕ ವಲಯವನ್ನು ಸಹ ಸಮರ್ಥಗೊಳಿಸಿದ್ದೇವೆ ಎಂದು ಪ್ರಧಾನಿ ಹೇಳಿದರು. ಶಸ್ತ್ರಾಸ್ತ್ರಗಳ ಕಾರ್ಖಾನೆಯನ್ನು ೭ ದೊಡ್ಡ ಕಂಪನಿಗಳಾಗಿ ಪರಿವರ್ತಿಸಲಾಗಿದೆ. ಡಿಆರ್‌ಡಿಒ ಹಾಗೂ ಎಚ್‌ಎಎಲ್

ಅನ್ನು ಬಲಪಡಿಸಲಾಗಿದೆ. ಉತ್ತರ ಪ್ರದೇಶ ಹಾಗೂ ತಮಿಳುನಾಡಿನಲ್ಲಿ ೨ ಬೃಹತ್ ರಕ್ಷಣಾ ಕಾರಿಡಾರ್‌ಗಳನ್ನು ನಿರ್ಮಿಸಲಾಗಿದೆ. ಇಂತಹ ಹಲವು ನಿರ್ಧಾರಗಳು ರಕ್ಷಣಾ ವಲಯಕ್ಕೆ ಹೊಸ ಶಕ್ತಿ ತುಂಬಿವೆ ಎಂದು ಪ್ರಧಾನಿ ತಿಳಿಸಿದರು. ಸ್ಪೇನ್ ಪ್ರಧಾನಿ ಪೆಡ್ರೊ ಸ್ಯಾಂಚೆಝ್ ಮಾತನಾಡಿ, ಇಂದು ನಾವು ಅತ್ಯಾಧುನಿಕ ಕೈಗಾರಿಕಾ ಸೌಲಭ್ಯಗಳನ್ನು ಅಧಿಕೃತವಾಗಿ ಉದ್ಘಾಟನೆ ಮಾಡಿದ್ದು ಮಾತ್ರವಲ್ಲ, ೨ ಬೃಹತ್ ಸಂಸ್ಥೆಗಳ ನಡುವಣ ಅಸಾಧಾರಣ ಯೋಜನೆ ಹೇಗೆ ಕಾರ್ಯರೂಪಕ್ಕೆ ಬರುತ್ತಿದೆ ಎಂಬುದನ್ನು ಸಾಕ್ಷಿಯಾಗಿದೆ ಎಂದು ಹೇಳಿದರು. ಏರ್ ಬಸ್ ಹಾಗೂ ಟಾಟಾ ನಡುವಿನ ಈ ಪಾಲುದಾರಿಕೆಯೂ ಭಾರತೀಯ ವಿಮಾನ ತಯಾರಿಕಾ ವಲಯದ ಪ್ರಗತಿಗೆ ಕೊಡುಗೆ ನೀಡಲಿದೆ. ಇತರ ಐರೋಪ್ಯ ದೇಶಗಳ ಕಂಪನಿಗಳ ಆಗಮನಕ್ಕೆ ಹೊಸ ಅವಕಾಶವನ್ನು ತೆರೆಯಲಿದೆ. ಈ ಯೋಜನೆಯೂ ಎರಡು ಜಗತ್ತಿನ ಅತ್ಯುತ್ತಮ ಕಂಪನಿಗಳನ್ನು ಒಟ್ಟಿಗೆ ತರುತ್ತಿದೆ ಎಂದು ಹೇಳಿದರು. ಸಮಾರಂಭದಲ್ಲಿ ಟಾಟಾ ಸನ್ಸ್ ಅಧ್ಯಕ್ಷ ಎನ್. ಚಂದ್ರಶೇಖರನ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ವಡೋದರದಲ್ಲಿ ಸ್ಪೇನ್ ಅಧ್ಯಕ್ಷ ಪೆಡ್ರೊ ಸ್ಯಾಂಚೆಝ್ ಹಾಗೂ ಪ್ರಧಾನಿ ನರೇಂದ್ರ ಮೋದಿ ರೋಡ್ ಶೋ ನಡೆಸಿದರು. ಇದೇ ಸಂದರ್ಭದಲ್ಲಿ ಸಾವಿರಾರು ಮಂದಿ ಜಮಾಹಿಸಿದ್ದರು.

<><*<><>*><>

ಕೇಂದ್ರ ಸರ್ಕಾರ ಭತ್ತದ ಬೆಂಬಲ ಬೆಲೆ - ಎಂಎಸ್‌ಪಿ ಹೆಚ್ಚಿಸುವ ಮೂಲಕ ಭತ್ತ ಬೆಳೆಯುವ ರೈತರ ಬೆಂಬಲಕ್ಕೆ ನಿಂತಿದೆ. ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿ ನಿನ್ನೆ ದೆಹಲಿಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಈ ಮಾಹಿತಿ ನೀಡಿದ್ದಾರೆ. ೨೦೧೩-೧೪ರಲ್ಲಿ ಪ್ರತಿ ಕ್ವಿಂಟಲ್ ಭತ್ತಕ್ಕೆ ೧ ಸಾವಿರದ ೩೧೦ ಇದ್ದ ಬೆಂಬಲ ಬೆಲೆಯನ್ನು ಈಗ ೨ ಸಾವಿರದ ೩೦೦ ರೂಪಾಯಿಗೆ ಹೆಚ್ಚಿಸಲಾಗಿದೆ ಎಂದು ತಿಳಿಸಿದರು. ಕೇಂದ್ರ ಆಹಾರ ಇಲಾಖೆ ಮತ್ತು ಭಾರತೀಯ ಆಹಾರ ನಿಗಮವು ಪ್ರಸಕ್ತ ಮುಂಗಾರು ಹಂಗಾಮಿನ ೧೮೫ ಲಕ್ಷ ಟನ್ ಭತ್ತ ಮತ್ತು ೧೨೪ ಲಕ್ಷ ಟನ್ ಅಕ್ಕಿ ಸಂಗ್ರಹಕ್ಕೆ ಯೋಜನೆ ಸಹ ಹಾಕಿಕೊಂಡಿದೆ ಎಂದರು. ಭತ್ತದ ಬೆಳೆಗಾರರು ಆತಂಕ ಪಡುವ ಅಗತ್ಯವಿಲ್ಲ. ಪ್ರಸ್ತುತ ಮುಂಗಾರು ಹಂಗಾಮು ಭತ್ತ ಸಂಗ್ರಹಕ್ಕೆ ಸಾಕಷ್ಟು ಸ್ಥಳವಿದೆ. ಪ್ರಸ್ತುತ ೧೪ ಎಲ್ ಎಂಟಿ ಭತ್ತ ಸಂಗ್ರಹಕ್ಕೆ ಸ್ಥಳಾವಕಾಶವಿದೆ. ಪಂಜಾಬಿನಲ್ಲಿ ಸಂಗ್ರಹಿಸಿರುವ ಅಕ್ಕಿಯನ್ನು ತ್ವರಿತವಾಗಿ ಸ್ಥಳಾಂತರಿಸಲಾಗುತ್ತಿದೆ ಎಂದು ತಿಳಿಸಿದರು. ಅಕ್ಟೋಬರ್ ೧ ರಿಂದ ೨ ಸಾವಿರದ ೭೦೦ ಮಂಡಿಗಳಲ್ಲಿ ಭತ್ತ ಸಂಗ್ರಹಣೆ ಪ್ರಾರಂಭಿಸಿದ್ದು, ಇಂದಿಗೆ ಒಟ್ಟು ೫೦ ಎಲ್‌ಎಂಟಿ ಭತ್ತವನ್ನು ಸಂಗ್ರಹಿಸಲಾಗಿದೆ ಎಂದರು. ನಾಮನಿರ್ದೇಶನದ ಆಧಾರದ ಮೇಲೆ ಸಿಡಬ್ಲ್ಯೂಸಿ/ಎಸ್‌ಡಬ್ಲ್ಯೂಸಿ ಗೋದಾಮುಗಳನ್ನು ಬಾಡಿಗೆಗೆ ತೆಗೆದುಕೊಂಡು ಸಂಗ್ರಹಕ್ಕೆ ವ್ಯವಸ್ಥೆ ಮಾಡಲಾಗಿದೆ. ಗೋಧಿ ದಾಸ್ತಾನು ತ್ವರಿತ ಸ್ಥಳಾಂತರ ಜೊತೆಗೆ ಪಿಇಜಿ ಯೋಜನೆಯಡಿ ೩೧ ಎಲ್‌ಎಂಟಿ ಶೇಖರಣೆಗೆ ವ್ಯವಸ್ಥೆ ಮಾಡಲಾಗುತ್ತಿದೆ ಎಂದು ಹೇಳಿದರು. ಅಕ್ಕಿ ಗಿರಣಿದಾರರಿಗೆ ದೂರು ಪರಿಹಾರಕ್ಕಾಗಿ ಆನ್‌ಲೈನ್ ಪೋರ್ಟಲ್ ಅನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದೂ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು. ಅಕ್ಟೋಬರ್ ೨೪ಕ್ಕೆ ೩೪.೭೫ ಎಲ್‌ಎಂಟಿನ ಅಖಿಲ ಭಾರತ ಚಾಲನಾ ಯೋಜನೆಯಿಂದ ಪಂಜಾಬ್‌ಗೆ ಸುಮಾರು ಶೇಕಡ ೪೦ ಪಾಲನ್ನು ಹಂಚಲಾಗಿದೆ.

ಚಾಲನಾ ಯೋಜನೆ ಮತ್ತು ಶೇಖರಣಾ ಸಾಮರ್ಥ್ಯ ರಚನೆ ವಾರಕ್ಕೊಮ್ಮೆ ಮೇಲ್ವಿಚಾರಣೆ ಮಾಡಲು ಉನ್ನತ ಮಟ್ಟದ ಸಮಿತಿಯನ್ನು ಸ್ಥಾಪಿಸಲಾಗಿದೆ. ೧೫ ದಿನಗಳ ಕಾಯುವ ಅವಧಿಯನ್ನು ಮೀರಿ ಗೊತ್ತುಪಡಿಸಿದ ಡಿಪೋಗಳಲ್ಲಿ ಖಾಲಿ ಜಾಗದ ಲಭ್ಯತೆಯಿಲ್ಲದ ಸಂದರ್ಭದಲ್ಲಿ ಹೆಚ್ಚುವರಿ ಸಾರಿಗೆ ಶುಲ್ಕಗಳನ್ನು ಅನುಮತಿಸಲಾಗಿದೆ.

<><*<><>*><>

ಜಮ್ಮು-ಕಾಶ್ಮೀರದ ಅಕ್ನೂರ್ ವಲಯದಲ್ಲಿ ಸೇನಾ ವಾಹನವನ್ನು ಗುರಿಯಾಗಿಸಿಕೊಂಡು ಭಯೋತ್ಪಾದಕರು ಹಲವು ಸುತ್ತು ಗುಂಡು ಹಾರಿಸಿದ್ದಾರೆ. ಜಮ್ಮು ಜಿಲ್ಲೆಯ ಅಕ್ನೂರ್ ವಲಯದ ಬತ್ತಲ್ ಪ್ರದೇಶದಲ್ಲಿ ಭದ್ರತಾಪಡೆಗಳು ಪ್ರಸ್ತುತ ದೊಡ್ಡ ಪ್ರಮಾಣದಲ್ಲಿ ಶೋಧನಾ ಕಾರ್ಯಾಚರಣೆ ಆರಂಭಿಸಿವೆ ಎಂದು ನಮ್ಮ ಆಕಾಶವಾಣಿಯ ಜಮ್ಮು ಬಾತ್ಮೀದಾರರು ವರದಿ ಮಾಡಿದ್ದಾರೆ. ಬತ್ತಲ್ ಪ್ರದೇಶದಲ್ಲಿರುವ ಅಸ್ಸಾನ್ ದೇವಾಲಯದ ಬಳಿ ಶಸ್ತ್ರ ಸಜ್ಜಿತ ಭಯೋತ್ಪಾದಕರು ಕಾಣಿಸಿಕೊಂಡಿದ್ದಾರೆ ಎಂದು ಗ್ರಾಮಸ್ಥರು ಮುಂಚೂಣಿ ಪ್ರದೇಶಗಳಲ್ಲಿ ಸೇನಾ ತುರ್ತು ವಾಹನ ಸಂಚರಿಸುವಾಗ ಹಲವು ಬಾರಿ ಗುಂಡಿನ ಶಬ್ದಗಳು ಕೇಳಿ ಬಂದವು ಎಂದು ಹೇಳಿದ್ದಾರೆ.

<><*<><>*><>

ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ - ಎನ್‌ಡಿಎಂಎ ತನ್ನ ೨೦ನೇ ಸಂಸ್ಥಾಪನಾ ದಿನವನ್ನು ದೆಹಲಿಯಲ್ಲಿಂದು ಆಚರಿಸಿಕೊಳ್ಳಲಿದೆ. ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸಲಿದ್ದಾರೆ. ಈ ವರ್ಷದ ಸಂಸ್ಥಾಪನಾ ದಿನದ ವಿಷಯ ನಡವಳಿಕೆಯ ಬದಲಾವಣೆಗಳಿಗಾಗಿ ಜಾಗೃತಿಯ ಮೂಲಕ ವಿಪತ್ತು ಅಪಾಯ ತಗ್ಗಿಸಿ ಸಮುದಾಯವನ್ನು ಸಶಕ್ತಗೊಳಿಸುವುದಾಗಿದೆ. ವಿಪತ್ತುಗಳ ಪರಿಣಾಮಗಳನ್ನು ತಗ್ಗಿಸಲು ಎಲ್ಲರನ್ನೊಳಗೊಂಡ ಹಾಗೂ ಪೂರ್ವಾಭಾವಿ ಕ್ರಮಗಳನ್ನು ಜಾರಿಗೆ ತರಲು ಭಾರತ ಬದ್ಧವಾಗಿದೆ ಎಂದು ಕೇಂದ್ರ ಗೃಹಸಚಿವಾಲಯ ಹೇಳಿದೆ.

<><*<><>*><>

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು, ಉತ್ತರಪ್ರದೇಶದ ವಾರಾಣಸಿಯ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಬಿಹೆಚ್‌ಯು ೧೩ನೇ ಘಟಿಕೋತ್ಸವ ಸಮಾರಂಭದಲ್ಲಿ ಇಂದು ಪಾಲ್ಗೊಳ್ಳಲಿದ್ದಾರೆ. ಅಲ್ಲದೇ ಬಿಎಚ್‌ಯು ನ ಸಂಶೋಧನಾ ಸಾಮರ್ಥ್ಯಗಳನ್ನು ಹೆಚ್ಚಿಸಲು ೪೦೦ ಕೋಟಿ ರೂಪಾಯಿಗಳ ಯೋಜನೆಗಳಿಗೆ ಶಿಲನ್ಯಾಸ ನೆರವೇರಿಸಲಿದ್ದಾರೆ.  ಸ್ವತಂತ್ರಭವನದಲ್ಲಿ ನಡೆಯಲಿರುವ ಘಟಿಕೋತ್ಸವ ಸಮಾರಂಭದಲ್ಲಿ ಸಚಿವ ಪ್ರಧಾನ್ ವಿವಿಧ ವಿಭಾಗಗಳ ೧ ಸಾವಿರದ ೯೫೪ ಪದವೀಧರರಿಗೆ ಪದವಿ ಪ್ರಧಾನ ಮಾಡಲಿದ್ದಾರೆ.

<><*<><>*><>

ಸಾರ್ವಜನಿಕ ಜೀವನದಲ್ಲಿ ಪ್ರಾಮಾಣಿಕತೆಯನ್ನು ಉತ್ತೇಜಿಸಲು ಮತ್ತು ಭ್ರಷ್ಟಾಚಾರ ಮುಕ್ತ ಸಮಾಜದ ಗುರಿ ಸಾಧಿಸಲು ವಿಜಿಲೆನ್ಸ್ ಜಾಗೃತಿ ಸಪ್ತಾಹ ೨೦೨೪ ಅನ್ನು ಇಂದಿನಿಂದ ದೇಶಾದ್ಯಂತ ಆಚರಿಸಲಾಗುತ್ತದೆ.

ಭ್ರಷ್ಟ ಪದ್ಧತಿಗಳ ವಿರುದ್ಧ ಜಾಗೃತಿ ಮೂಡಿಸಲು ಸಪ್ತಾಹದಲ್ಲಿ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಪ್ರತಿ ವರ್ಷ ಭಾರತ ರತ್ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದಂದು ವಿಜಿಲೆನ್ಸ್ ಜಾಗೃತಿ ಸಪ್ತಾಹವನ್ನು ಆಚರಿಸಲಾಗುತ್ತದೆ.

<><*<><>*><>

ಕರ್ನಾಟಕದ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದ ತೇಜಸ್ವಿ ಸೂರ್ಯ ನಿನ್ನೆ ಗೋವಾದಲ್ಲಿ ನಡೆದ ಐರನ್ ಮ್ಯಾನ್ - ೭೦.೩ ಚಾಲೆಂಜ್ ರೇಸ್‌ನಲ್ಲಿ ಜಯ ಸಾಧಿಸಿದ ದೇಶದ ಮೊದಲ ಜನಪ್ರತಿನಿಧಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಸ್ಪರ್ಧೆಯು ೧ ಸಾವಿರದ ೯೦೦ ಮೀಟರ್ ಈಜು, ೯೦ ಕಿಲೋಮೀಟರ್ ಸೈಕ್ಲಿಂಗ್ ಹಾಗೂ ೨೧.೧ ಕಿಲೋಮೀಟರ್ ಓಟ ಹೀಗೆ ಮೂರು ವಿಭಾಗಗಳಲ್ಲಿ ನಡೆಯಿತು. ೮ ಗಂಟೆ ೨೭ ನಿಮಿಷ ೩೨ ಸೆಕೆಂಡ್‌ಗಳಲ್ಲಿ ಈ ಎಲ್ಲ ಚಟುವಟಿಕೆಗಳನ್ನು ಪೂರ್ಣಗೊಳಿಸುವ ಮೂಲಕ ತೇಜಸ್ವಿ ಸೂರ್ಯ ಗೆಲುವು ಸಾಧಿಸಿದ್ದಾರೆ.

<><*<><>*><>

ಇರಾನ್ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರು, ಜಾಗತಿಕ ಸೇನಾ ಮೈತ್ರಿಕೂಟಕ್ಕೆ ಕರೆ ನೀಡಿದ್ದಾರೆ.
ಇರಾನ್‌ನ ಪ್ರಮುಖ ಸೇನಾ ನೆಲೆಗಳ ಮೇಲೆ ವಾರಾಂತ್ಯದಲ್ಲಿ ವೈಮಾನಿಕ ದಾಳಿ ನಡೆಸಿದ ಇಸ್ರೇಲ್ ಸೂಕ್ತ ಬೆಲೆ ತೆರಬೇಕಾಗಿದೆ ಎಂದು ಇತರ ಉನ್ನತ ಅಧಿಕಾರಿಗಳು ಪ್ರತಿಜ್ಞೆ ಮಾಡಿದ್ದಾರೆ.

<><*<><>*><>

ಅಮೆರಿಕ ಅಧ್ಯಕ್ಷ ಜೊ ಬೈಡನ್ ಶ್ವೇತ ಭವನದಲ್ಲಿ ದೀಪಾವಳಿ ಆಚರಿಸಲಿದ್ದಾರೆ. ದೇಶಾದ್ಯಂತ ಹೆಚ್ಚಿನ ಸಂಖ್ಯೆಯ ಭಾರತೀಯ ಅಮೆರಿಕನ್ನರು ಸಂಜೆ ನಡೆಯುವ ಸಂಭ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಬೈಡನ್ ಅವರಿಗೆ ಇದು ಅಧ್ಯಕ್ಷರಾಗಿ ಕೊನೆಯ ದೀಪಾವಳಿಯಾಗಲಿದೆ ಎಂದು ಶ್ವೇತಭವನ ತಿಳಿಸಿದೆ. ಈ ದಿನವು ಭಾರತೀಯ ಪರಂಪರೆ ಹಾಗೂ ಸಂಸ್ಕೃತಿಗೆ ಸ್ಮರಣೀಯ ಗೌರವವಾಗಿದೆ. ಅಮೆರಿಕ ಹಾಗೂ ಭಾರತೀಯ ಅಮೆರಿಕ ಸಮುದಾಯದ ನಡುವೆ ಬೆಳೆಯುತ್ತಿರುವ ಬಾಂಧವ್ಯವನ್ನು ಒತ್ತಿ ಹೇಳುತ್ತದೆ.

<><*<><>*><>

ಇಟಲಿಯಲ್ಲಿ ನಡೆಯುತ್ತಿರುವ ವಿಶ್ವ ಟೆಬಲ್ ಟೆನಿಸ್ ಟೂರ್ನಿಯ ಫೀಡರ್ ಕ್ಯಾಗ್ಲಿಯಾರಿ ೨೦೨೪ರಲ್ಲಿ ಭಾರತದ ಯಶಸ್ವಿನಿ ಘೋರ್ಪಡೆ ಹಾಗೂ ಕೃತ್ವಿಕಾ ರಾಯ್ ಜೋಡಿ ಮಹಿಳೆಯರ ಡಬಲ್ಸ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ. ಫೈನಲ್ಸ್‌ನಲ್ಲಿ ದಕ್ಷಿಣ ಕೋರಿಯಾದ ಯು ಸಿವೊ ಹಾಗೂ ಕಿಮ್ ಹೆಯುನ್ ಜೋಡಿಯನ್ನು ೩-೧ ಸುತ್ತುಗಳಿಂದ ಸೋಲಿಸಿ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>